# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ. : 2435
2. ಸದಸ್ಯರ ಹೆಸರು : ಶ್ರೀ.ಎಂ.ಎಲ್.ಅನಿಲ್‌ಕುಮಾರ್
3. ಉತ್ತರಿಸಬೇಕಾದ ದಿನಾಂಕ : 22.03.2022
4. ಉತ್ತರಿಸುವ ಸಚಿವರು : ಸಹಕಾರ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಎ.ಪಿ.ಎಂ.ಸಿ. ಕೃಷಿ ಮಾರುಕಟ್ಟೆಯ ಧ್ಯೇಯೋದ್ದೇಶಗಳೇನು; (ವಿವರ ನೀಡುವುದು) | ರಾಜ್ಯದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಧ್ಯೇಯೋದ್ದೇಶಗಳು ಈ ಕೆಳಕಂಡಂತಿದೆ.<br>• ರಾಜ್ಯದಲ್ಲಿ ಕ್ರಿಯಾಶೀಲ ಮತ್ತು ಸ್ವಾವಲಂಬಿ ಕೃಷಿ ಮಾರಾಟ ವ್ಯವಸ್ಥೆಯನ್ನು ಅಭಿವೃದ್ಧಿಗೊಳಿಸುವುದರ ಮೂಲಕ ಕರ್ನಾಟಕದಲ್ಲಿ ವಿಶೇಷವಾಗಿ ರೈತರ ಹಾಗೂ ಎಲ್ಲಾ ಮಾರಾಟ ಆಸಕ್ತರ ಪಾಲುದಾರಿಕೆಯ ಸಮಾನತೆಯ, ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಯನ್ನು ಸಾಧಿಸುವುದು.<br>• ಸಾಕಷ್ಟು ಮೂಲಸೌಕರ್ಯ ಮತ್ತು ಸ್ನೇಹಪರ ವಿದ್ಯುನ್ಮಾನ ವ್ಯವಸ್ಥೆಯ ಮೂಲಕ ಪಾಲುದಾರಿಕೆಯ, ಪಾರದರ್ಶಕತೆಯ ಹಾಗೂ ವೈಜ್ಞಾನಿಕ ಕೃಷಿ ಉತ್ಪನ್ನ ಮಾರಾಟ ವ್ಯವಸ್ಥೆಯನ್ನು ಅಭಿವೃದ್ಧಿಗೊಳಿಸುವುದು.<br>• ರೈತರು ತಮ್ಮ ಉತ್ಪನ್ನಗಳಿಗೆ ಅತ್ಯುತ್ತಮ ಬೆಲೆ ಪಡೆಯಲು ಸಹಕಾರಿಯಾಗುವಂತೆ ತೊಂದರೆ ಮುಕ್ತ ಮಾರಾಟ ವ್ಯವಸ್ಥೆಯನ್ನು ರೂಪಿಸುವುದು.<br>• ಕೃಷಿ ಉತ್ಪನ್ನಗಳಿಗೆ ನ್ಯಾಯಯುತವಾದ ತೂಕ, ಸ್ಪರ್ಧಾತ್ಮಕ ಬೆಲೆ, ನಿಗಧಿತ ಮಾರುಕಟ್ಟೆ ರಿವಾಜುಗಳು, ಶೀಘ್ರ ಹಣ ಪಾವತಿ ವ್ಯವಸ್ಥೆ ಮತ್ತು ವ್ಯಾಜ್ಯ ತೀರ್ಮಾನ ವ್ಯವಸ್ಥೆ ಕಲ್ಪಿಸುವುದು.<br>• ಮಾಹಿತಿ ತಂತ್ರಜ್ಞಾನ ಬಳಕೆ, ರೈತರಿಗೆ ಪರಿಣಾಮಕಾರಿಯಾಗಿ ಮಾರುಕಟ್ಟೆ ಬೆಲೆ, ಮಾಹಿತಿಯ ಪ್ರಸಾರ ಮತ್ತು ಉತ್ತಮ ಬೆಲೆ ಪಡೆಯುವುದಕ್ಕಾಗಿ ಸ್ಪರ್ಧೆಯನ್ನು ಹೆಚ್ಚಿಸುವುದರ ಮೂಲಕ ದಕ್ಷತೆಯನ್ನು ಹೆಚ್ಚಿಸುವುದು. |
| ಆ | ಕೋಲಾರ ಜಿಲ್ಲೆಯ ಎ.ಪಿ.ಎಂ.ಸಿ.ಕೃಷಿ ಮಾರುಕಟ್ಟೆಯು ಏಶಿಯಾದಲ್ಲಿಯೇ 2ನೇ ಅತಿ ದೊಡ್ಡ ಮಾರುಕಟ್ಟೆಯಾಗಿದ್ದು, ಸದರಿ ಮಾರುಕಟ್ಟೆಗೆ ಸರಿಯಾದ ಜಾಗವಿಲ್ಲ ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಸರ್ಕಾರವು ಈ ಬಗ್ಗೆ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು) | ಬಂದಿದೆ.<br><br>ಜಿಲ್ಲಾಧಿಕಾರಿ, ಕೋಲಾರ ಜಿಲ್ಲೆ, ಕೋಲಾರ, ಇವರ ದಿನಾಂಕ:30.07.2021ರ ಪತ್ರದಲ್ಲಿ ಕಂದಾಯ ಇಲಾಖೆಗೆ "ಅರಣ್ಯ ಇಲಾಖೆಗೆ ಸೇರಿದ ಕೋಲಾರ ತಾಲ್ಲೂಕು, ವಕ್ಕಲೇರಿ ಹೋಬಳಿ ಕಪರಸಿದ್ದನಹಳ್ಳಿ ಗ್ರಾಮದ ಸರ್ವೆ ನಂ.08ರಲ್ಲಿ 17 ಎಕರೆ 10 ಗುಂಟೆ ಮತ್ತು ಮಡೇರಹಳ್ಳಿ ಗ್ರಾಮದ ಸರ್ವೆ ನಂ.35ರಲ್ಲಿ 12 ಎಕರೆ 30 ಗುಂಟೆ ಒಟ್ಟು 30 ಎಕರೆ ಜಮೀನನ್ನು ಕೃಷಿ ಮಾರುಕಟ್ಟೆ ಸಮಿತಿಗೆ ವರ್ಗಾಯಿಸಿ ಇದರ ಬದಲಾಗಿ ಕೋಲಾರ ತಾಲ್ಲೂಕು, ಹೋಳೂರು ಹೋಬಳಿ, ನಾಯಕರಹಳ್ಳಿ ಗ್ರಾಮದ ಸರ್ವೆ ನಂ.192ರಲ್ಲಿ 18-03 ಹೆಕ್ಟೇರ್ ಜಮೀನನ್ನು ಅರಣ್ಯ ಇಲಾಖೆಗೆ ವರ್ಗಾಯಿಸಲು ಸುತ್ತೋಲೆ ದಿನಾಂಕ: 08.08.2008ರನ್ವಯ ಜಿಲ್ಲಾಧಿಕಾರಿಗಳಿಗೆ ಅಧಿಕಾರ ಇಲ್ಲದಿರುವುದರಿಂದ ಪ್ರಸ್ತಾಪಿತ ಬದಲಿ ಜಮೀನನ್ನು ಅರಣ್ಯ ಇಲಾಖೆಗೆ ವರ್ಗಾಯಿಸಲು ಮಂಜೂರಾತಿ ಹಾಗೂ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.<br><br>ನಂತರದಲ್ಲಿ ಅರಣ್ಯ ಇಲಾಖೆಯಿಂದ ಕೋರಿರುವ ಹೆಚ್ಚುವರಿ ಮಾಹಿತಿ/ದಾಖಲೆಗಳನ್ನು ಸಲ್ಲಿಸಲಾಗಿದ್ದು, ಪ್ರಸ್ತುತ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (FCA), ಇವರು ಅರಣ್ಯ ಸಂರಕ್ಷಣಾ ಕಾಯ್ದೆ 1980 ರಂತೆ ಕೇಂದ್ರ ಸರ್ಕಾರದ ಪೂರ್ವ ಮಂಜೂರಾತಿಗಾಗಿ |

| | | |
|---|---|---|
| | | ಪ್ರಸ್ತಾವನೆಯನ್ನು ಶಿಫಾರಸ್ಸು ಮಾಡುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ, ಇಲಾಖೆಗೆ ದಿನಾಂಕ:10/15.02.2022ರಂದು ಪ್ರಸ್ತಾವನೆ ಸಲ್ಲಿಸಿದದ್ದು, ಕೇಂದ್ರ ಸರ್ಕಾರದೊಂದಿಗೆ ಸಂವಹಿಸಿ ಅನುಮೋದನೆ ಪಡೆಯುವ ಬಗ್ಗೆ ಪರಿಶೀಲನೆಯಲ್ಲಿದೆ. |
| ಇ. | ಸಹಕಾರ ಇಲಾಖೆಯಿಂದ ರೈತರಿಗೆ ನೀಡುವ ಯೋಜನೆಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು) | ಸಹಕಾರ ಇಲಾಖೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಯೋಜನೆಗಳು:-<br>1.<u>ರೈತ ಸಂಜೀವಿನಿ ಅಪಘಾತ ವಿಮಾ ಯೋಜನೆ :</u><br>ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ ವತಿಯಿಂದ ರೈತ ಸಂಜೀವಿನಿ ಅಪಘಾತ ವಿಮಾ ಯೋಜನೆ ಅನುಷ್ಠಾನಗೊಳಿಸಲಾಗಿದೆ. ರೈತ/ರೈತ ಕುಟುಂಬದವರು ಕೃಷಿ ಚಟುವಟಿಕೆಗಳಲ್ಲಿ ಹಾಗೂ ಕೃಷಿ ಉತ್ಪನ್ನ ಮಾರಾಟ ಚಟುವಟಿಕೆಗಳಲ್ಲಿ ತೊಡಗಿರುವಾಗ ಅಪಘಾತ ಸಂಭವಿಸಿ ಸಾವು ಅಥವಾ ಅಂಗವಿಕಲತೆ ಉಂಟಾದಲ್ಲಿ ಅಂತಹವರ ಕುಟುಂಬಕ್ಕೆ ಈ ಯೋಜನೆಯಲ್ಲಿ ಪರಿಹಾರ ಮೊತ್ತ ನೀಡಲಾಗುವುದು. ಈ ಯೋಜನೆಯಡಿ ರೈತರು ಆಕಸ್ಮಿಕವಾಗಿ ಮರಣ ಅಥವಾ ಶಾಶ್ವತ ಅಂಗವಿಕಲತೆ ಹೊಂದಿದ್ದಲ್ಲಿ ರೂ.10,000/- ದಿಂದ ರೂ.1,00,000/- ರವರೆಗೆ ಪರಿಹಾರ ಮೊತ್ತ ನೀಡಲು ಅವಕಾಶವಿರುತ್ತದೆ.<br>ಈ ಯೋಜನೆಯ ಪ್ರಾರಂಭದಿಂದ ಈವರೆಗೆ (1996-97 ರಿಂದ ಫೆಬ್ರುವರಿ 2022ರವರೆಗೆ) 10490 ಫಲಾನುಭವಿ ರೈತರುಗಳಿಗೆ ರೂ. 41,46,28,764/- ಮೊತ್ತವನ್ನು ಪರಿಹಾರ ಧನವಾಗಿ ರೈತ ಕುಟುಂಬಗಳಿಗೆ ವಿತರಿಸಲಾಗಿದೆ.<br>2.<u>ಕನಿಷ್ಠ ಬೆಂಬಲ ಬೆಲೆ ಯೋಜನೆ:</u><br>ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ಬೆಲೆಗಳು ಮಾರುಕಟ್ಟೆಗಳಲ್ಲಿ ಕುಸಿತವಾದಾಗ ರೈತರು ಒತ್ತಡದ ಪರಿಸ್ಥಿತಿಯಲ್ಲಿ ಮಾರಾಟ ಮಾಡುವುದನ್ನು ತಪ್ಪಿಸಲು ಬೆಂಬಲ ಬೆಲೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>1999 ರಿಂದ 2021-22ರವರೆಗೆ ಕನಿಷ್ಠ ಬೆಂಬಲಬೆಲೆ ಯೋಜನೆಯಡಿ 28,35,637 ಫಲಾನುಭವಿ ರೈತರಿಂದ ಸುಮಾರು 8,60,52,952 ಕ್ವಿಂಟಾಲ್ ಪ್ರಮಾಣದ ವಿವಿಧ ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳನ್ನು ಖರೀದಿಸಲಾಗಿರುತ್ತದೆ.<br>3. <u>ಅಲ್ಪಾವಧಿ ಬೆಳೆ ಸಾಲ ಹಾಗೂ ಹೈನುಗಾರಿಕೆ ಉದ್ದೇಶಕ್ಕಾಗಿ ಕೆ.ಸಿ.ಸಿ.ಸಾಲ:-</u><br>ರೂ. 3.00 ಲಕ್ಷಗಳವರೆಗೆ ಶೂನ್ಯ ಬಡ್ಡಿ ದರದಲ್ಲಿ ಅಲ್ಪಾವಧಿ ಬೆಳೆ ಸಾಲ ಮತ್ತು ಪಶುಸಂಗೋಪನೆ/ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳವಾಗಿ ರೂ.2.00 ಲಕ್ಷಗಳವರೆಗೆ ಶೂನ್ಯ ಬಡ್ಡಿದರದಲ್ಲಿ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ.<br>4. <u>ಮಧ್ಯಮಾವಧಿ/ ದೀರ್ಘಾವಧಿ ಕೃಷಿ ಸಾಲ:-</u><br>ಕೃಷಿ ಪತ್ತಿನ ಸಹಕಾರ ಸಂಘಗಳ ಅಂದರೆ, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಟಿಬೇಟಿಯನ್ ಸಹಕಾರ ಸಂಸ್ಥೆಗಳು ಲ್ಯಾಂಪ್ಸ್ ಸಹಕಾರ ಸಂಘಗಳು, ಪಿಕಾರ್ಡ್ ಬ್ಯಾಂಕ್‌ಗಳು ಮೂಲಕ ಶೇ. 3 ರ ಬಡ್ಡಿ ದರ ಅನ್ವಯವಾಗುವಂತೆ ಗರಿಷ್ಟ ರೂ.10.00 ಲಕ್ಷಗಳವರೆಗೆ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ. |

5. <u>ಕೃಷಿ ಅಡಮಾನ ಸಾಲಗಳ ಮೇಲಿನ ಬಡ್ಡಿ ಸಹಾಯಧನ:-</u>

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಮತ್ತು ಪ್ರಾಥಮಿಕ ಕೃಷಿ ಮಾರುಕಟ್ಟೆ ಸಹಕಾರ ಸಂಘಗಳು ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಗೋದಾಮುಗಳಲ್ಲಿ ಶೇಖರಣೆ ಮಾಡಿ ದಾಸ್ತಾನು ಮೌಲ್ಯದ ಗರಿಷ್ಟ ಶೇ.60 ಅಥವಾ ರೂ.2.00 ಲಕ್ಷಗಳವರೆಗೆ ಸಾಲ ವಿತರಿಸುವುದು. ಸಹಕಾರ ಸಂಘಗಳು ಗರಿಷ್ಟ ಶೇ.11 ರ ಬಡ್ಡಿ ದರದಲ್ಲಿ ಬಡ್ಡಿ ಆಕರಣೆ ಮಾಡಿ ಸಾಲವನ್ನು ವಿತರಿಸತಕ್ಕದ್ದು. ಇದಕ್ಕೆ ಸರ್ಕಾರದರಿಂದ ಶೇ.4 ಬಡ್ಡಿ ಸಹಾಯಧನ ನೀಡಲಾಗುವುದು. ರೈತರಿಂದ ಶೇ.7 ಬಡ್ಡಿ ದರ ಪಡೆಯುವುದು.

6. <u>ಕೃಷಿ ಉತ್ಪನ್ನಗಳ ಸಂಗ್ರಹಣಾ ಶುಲ್ಕದಲ್ಲಿ ವಿನಾಯಿತಿ:-</u>

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಮತ್ತು ತಾಲ್ಲೂಕು ಕೃಷಿ ಮಾರುಕಟ್ಟೆ ಸಹಕಾರ ಸಂಘಗಳು ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಗೋದಾಮುಗಳಲ್ಲಿ ಸಂಗ್ರಹಿಸಿಡಲು ರೈತರು ಪಾವತಿಸುವ ಸಂಗ್ರಹಣಾ ಶುಲ್ಕದಲ್ಲಿ ಶೇ. 25% ರಷ್ಟು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ.50% ರಷ್ಟು ಸಹಾಯಧನ ಒದಗಿಸಲಾಗುವುದು.

7. <u>ಸ್ವ ಸಹಾಯ ಸಂಘಗಳ ಮೇಲಿನ ಬಡ್ಡಿ ಸಹಾಯಧನ :-</u>

ಡಿಸಿಸಿ ಬ್ಯಾಂಕುಗಳು ತಮ್ಮ ಶಾಖೆಗಳ ಮೂಲಕ ರೂ.5.00 ಲಕ್ಷದವರೆಗಿನ ಸಾಲಗಳನ್ನು ಮಹಿಳಾ ಸ್ವಸಹಾಯ ಗುಂಪುಗಳಿಗೆ ನಿವ್ವಳ ಶೂನ್ಯ ಬಡ್ಡಿದರದಲ್ಲಿ ಮತ್ತು ಪುರುಷ ಸ್ವಸಹಾಯ ಗುಂಪುಗಳಿಗೆ ನಿವ್ವಳ ಶೇ.4 ರ ಬಡ್ಡಿ ದರ ಅನ್ವಯವಾಗುವಂತೆ ಸಾಲ ವಿತರಿಸಲಾಗುತ್ತಿದೆ.

<u>8. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಹಿಂದುಳಿದ ವರ್ಗ/ಅಲ್ಪಸಂಖ್ಯಾತರು/ಮಹಿಳೆಯರು/ ಅಲೆಮಾರಿ/ವಿಕಲಚೇತನರನ್ನು ಎಲ್ಲಾ ವಿಧಧ ಸಹಕಾರ ಸಂಘಗಳಲ್ಲಿ ಸದಸ್ಯರನ್ನಾಗಿ ನೋಂದಾಯಿಸಲು ಸಹಾಯಧನ ಮಂಜೂರಾತಿ ಮತ್ತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಬಡತನ ರೇಖೆಗಿಂತ ಕೆಳಗಿರುವವರರನ್ನು ಸದಸ್ಯರನ್ನಾಗಿ ನೊಂದಾಯಿಸಲು ಸಹಾಯಧನ:-</u>

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ದವರಿಗೆ ರೂ 1000/- ಹಿಂದುಳಿದ ವರ್ಗ / ಅಲ್ಪಸಂಖ್ಯಾತ ವರ್ಗ/ ಮಹಿಳೆಯರು / ವಿಕಲಚೇತನರು /ಮಹಿಳೆಯರು / ಬಿ.ಪಿ.ಎಲ್.ದಾರರಿಗೆ ರೂ. 500/- ಗಳು ಅಥವಾ ಸಂಘದ ಒಂದು ಷೇರಿನ ಮೌಲ್ಯ ಪರಿಗಣಿಸಲಾಗುವುದು.

9. <u>ಲ್ಯಾಂಪ್ಸ್ ಸಹಕಾರ ಸಂಘಗಳಿಗೆ ಮಾರುಕಟ್ಟೆ ಮೂಲಭೂತ ಸೌಕರ್ಯ ಸ್ಥಾಪನೆಗೆ ಸಂಬಂಧಿಸಿದಂತೆ ಅನುದಾನ ಮಂಜೂರು ಮಾಡುವ ಯೋಜನೆ:-</u>

ಲ್ಯಾಂಪ್ಸ್ ಸಹಕಾರ ಸಂಘಗಳಿಗೆ ಗೋದಾಮು, ಮಾರಾಟ ಮಳಿಗೆ ಹಾಗೂ ಸಂಸ್ಕರಣ ಘಟಕಗಳಿಗೆ ಸರ್ಕಾರದಿಂದ ಅನುದಾನ ನೀಡಲಾಗುತ್ತದೆ.

....4

| | | |
|---|---|---|
| ಈ. | ಕೆಲವು ಯೋಜನೆ ಯಡಿಯಲ್ಲಿ ನೀಡುವ ಮೊತ್ತವು ಕಡಿಮೆಯಾಗಿದ್ದು, ಕೆಲ ಯೋಜನೆಗಳ ಮೊತ್ತ ಹೆಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ. ಇಲ್ಲವಾದಲ್ಲಿ ಈ ಪ್ರಸ್ತಾವನೆ ಯಾವ ಹಂತದಲ್ಲಿದೆ? (ಪೂರ್ಣ ಮಾಹಿತಿ ಒದಗಿಸುವುದು) | ರೈತ ಸಂಜೀವಿನಿ ಅಪಘಾತ ವಿಮಾ ಯೋಜನೆಯಡಿ ಮರಣ ಹೊಂದಿದ ಫಲಾನುಭವಿಗೆ ರೂ.75000/- ರಿಂದ ರೂ.1,00,000/- ಗಳ ಮರಣ ಪರಿಹಾರ ಮೊತ್ತವನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಈ ಹಿಂದೆ ಜಾರಿಯಲ್ಲಿದ್ದ, ಬೆಳೆ ಸಾಲ ಮನ್ನಾ ಯೋಜನೆಯಲ್ಲಿ ನೀಡಿರುವ ಮೊತ್ತವು ಕಡಿಮೆಯಾಗಿದ್ದು, ರೂ.361.67 ಕೋಟಿ ಹೆಚ್ಚುವರಿ ಅನುದಾನ ಒದಗಿಸುವಂತೆ ಹಾಗೂ ಬೆಳೆ ಸಾಲಕ್ಕಾಗಿ ಬಡ್ಡಿ ಸಹಾಯಧನ ಯೋಜನೆಯಲ್ಲಿ ನೀಡಿರುವ ಮೊತ್ತವು ಕಡಿಮೆಯಾಗಿದ್ದು, ರೂ.378.07 ಕೋಟಿಗಳ ಹೆಚ್ಚುವರಿ ಅನುದಾನ ಒದಗಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಸಿಒ 86 ಎಂಆರ್‌ಇ 2022

(ಎಸ್.ಟಿ.ಸೋಮಶೇಖರ್)
ಸಹಕಾರ ಸಚಿವರು